**ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ಕೊಪ್ಪ**

**ಸಿ.ಸಿ. ನಂ: 731/2021**

**ಫಿರ್ಯಾದುದಾರರು** : ಶ್ರೀ. ಹೆಚ್.ವಿ. ರಾಜೇಶ, ಬಿನ್. ವಾಸುದೇವ ಮೂರ್ತಿ,
51 ವರ್ಷ, ವ್ಯಾಪಾರಿ, ವಾಸ: ಸುಂದರ ನಗರ,
ಕೊಪ್ಪ 577 126.

:ವಿ:

**ಆರೋಪಿತರು** : ಶ್ರೀ. ನಾಗರಾಜ, ಬಿನ್. ತಮ್ಮಯ್ಯ ನಾಯ್ಕ,
40 ವರ್ಷ, ವಾಸ: ಗಂಗನಸರಳು,
ಗುಣವಂತೆ ಗ್ರಾಮ ಮತ್ತು ಅಂಚೆ,
ಕೊಪ್ಪ ತಾಲ್ಲೂಕು.

- - -

**ಆ ಪಾ ದ ನೆ**

ಆರೋಪಿಯಾದ ನಿಮ್ಮ ವಿರುದ್ಧ ಫಿರ್ಯಾದುದಾರರು ದಾಖಲು ಮಾಡಿರುವ ಫಿರ್ಯಾದು ಏನೆಂದರೆ, ನೀವು ಆರೋಪಿ 4,00,000/- ರೂ.ಗಳ 1.9.2021ನೇ ದಿನಾಂಕವನ್ನು ನಮೂದಿಸಿರುವ, 919333ನೇ ಸಂಖ್ಯೆಯ, ಸಿಂಡಿಕೇಟ್ ಬ್ಯಾಂಕ್, ಕೊಪ್ಪ ಶಾಖೆಯ ಒಂದು ಚೆಕ್ಕನ್ನು ಫಿರ್ಯಾದುದಾರರಿಗೆ ಕೊಡಬೇಕಾದ ಸಾಲದ ಬಾಬ್ತು ನಗದೀಕರಣಕ್ಕಾಗಿ ನೀಡಿದ್ದು, ಫಿರ್ಯಾದುದಾರರು ಅದನ್ನು ಜಮಾವಣೆಗಾಗಿ ಬ್ಯಾಂಕಿನಲ್ಲಿ ಹಾಜರುಪಡಿಸಿದಾಗ, ಬ್ಯಾಂಕಿನವರು "Syndicate bank (Erstwhile) cheque were valid till 30/06/2021. 01/07/2021 onwards Syndicate cheques were not valid. This is the reason this above said cheque was bounced back. Kindly

take new cheque book” ಎಂಬ ಹಿಂಬರಹದೊಂದಿಗೆ ಅದನ್ನು ವಾಪಾಸು ಮಾಡಿರುತ್ತಾರೆ ಹಾಗೂ ಈ ಬಗ್ಗೆ ನಿಮಗೆ ವಕೀಲರ ಮೂಲಕ ನೋಟೀಸನ್ನು ಕೊಟ್ಟರೂ ಸಹಾ ನೀವು ಆರೋಪಿ ಚೆಕ್ಕಿನಲ್ಲಿ ಒಳಗೊಂಡ ಹಣವನ್ನು ಮರುಪಾವತಿ ಮಾಡಿರುವುದಿಲ್ಲ, ಆದ್ದರಿಂದ, ನೀವು ಆರೋಪಿ ಫಿರ್ಯಾದುದಾರರಿಗೆ ಮೋಸ ಮಾಡಬೇಕೆನ್ನುವ ಉದ್ದೇಶದಿಂದ ಈ ರೀತಿಯ ಚೆಕ್ಕನ್ನು ನೀಡಿ ವರ್ಗಾವಣೀಯ ಲಿಖಿತ ಕಾಯ್ದೆ ಕಲಂ 138ರ ಪ್ರಕಾರ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ಪ್ರ:1: ಈಗ ಓದಿ ಹೇಳಿದ ಆಪಾದನೆ ತಿಳಿಯಿತೇ?
ಉ:

ಪ್ರ:2: ತಪ್ಪು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆ ಆಗಬೇಕಾ?
ಉ:

ಈ ಮೇಲ್ಕಂಡ ಆಪಾದನೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಹಾಗೂ ಸರಿಯಾಗಿದೆ ಎಂದು ದೃಢೀಕರಿಸುತ್ತೇನೆ.

ದಿನಾಂಕ: 6ನೇ ದಿವಸ, ಜನವರಿ ಮಾಹೆ, 2022.

(ಪ್ರಿಯಾ ರವಿ ಜೋಗಳೇಕರ್)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರದನ್ಯಾದಂ;ಕೊಪ್ಪ,